# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ — 1027
2) ಸದಸ್ಯರ ಹೆಸರು — ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)
3) ಉತ್ತರಿಸಬೇಕಾದ ದಿನಾಂಕ — 10-03-2021
4) ಉತ್ತರಿಸಬೇಕಾದ ಸಚಿವರು — ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮೀನುಗಾರಿಕೆ ಇಲಾಖೆಯಿಂದ ರಾಜ್ಯದ ಮೀನುಗಾರಿಕೆ ಉದ್ಯಮದ ಜನಾಂಗದ ಅಭಿವೃದ್ಧಿಗೆ ಯಾವ ಕಾರ್ಯಕ್ರಮಗಳನ್ನು / ಯೋಜನೆಗಳನ್ನು ಜಾರಿಗೊಳಿಸಲಾಗಿದೆ; (ವಿವರ ನೀಡುವುದು) | ರಾಜ್ಯದ ಮೀನುಗಾರಿಕೆ ಇಲಾಖೆಯಿಂದ ರಾಜ್ಯದ ಮೀನುಗಾರಿಕೆ ಉದ್ಯಮದ ಜನಾಂಗದ ಅಭಿವೃದ್ಧಿಗೆ ಜಾರಿಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರಗಳನ್ನು **<u>ಅನುಬಂಧ-1</u>** ರಲ್ಲಿ ನೀಡಲಾಗಿದೆ. |
| ಆ) | ಕಳೆದ 5 ವರ್ಷಗಳಲ್ಲಿ ರಾಜ್ಯದ ಮೀನುಗಾರಿಕೆ ಇಲಾಖೆಯಿಂದ ಕೆಲವು ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು) | ಮೀನುಗಾರಿಕೆ ಇಲಾಖೆಯಲ್ಲಿ ಕಳೆದ 5 ವರ್ಷಗಳಲ್ಲಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಈ ಅವಧಿಯಲ್ಲಿ ಮೀನುಗಾರಿಕೆ ಇಲಾಖೆಗೆ ನೀಡಿರುವ ಅನುದಾನ ಹಾಗೂ ವೆಚ್ಚದ ವಿವರ ಈ ಕೆಳಕಂಡಂತಿದೆ:-<br>(ರೂ.ಕೋಟಿಗಳಲ್ಲಿ) |

| ವರ್ಷ | ಅನುದಾನ | ವೆಚ್ಚ | ಶೇಕಡ ಪ್ರಗತಿ |
|---|---|---|---|
| 2015-16 | 211.79 | 184.44 | 87 |
| 2016-17 | 294.83 | 280.55 | 95 |
| 2017-18 | 335.37 | 321.94 | 96 |
| 2018-19 | 371.07 | 367.89 | 99 |
| 2019-20 | 323.48 | 315.68 | 98 |

| | ಪ್ರಶ್ನೆ | ಉತ್ತರ |
|---|---|---|
| ಇ) | ಪ್ರಸ್ತುತ ಸಾಲಿನಲ್ಲಿ ಯಾವುದಾದರೂ ನೂತನ ಯೋಜನೆಗಳನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು) | 2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮೀನುಗಾರಿಕೆ ಇಲಾಖೆಗೆ ಸಂಬಂಧಿಸಿದಂತೆ 10 ಯೋಜನೆಗಳನ್ನು ಘೋಷಿಸಲಾಗಿದ್ದು, ಈ ಪೈಕಿ 3 ಕಾರ್ಯಕ್ರಮಗಳನ್ನು ಅನುಮೋದಿಸಿ ಜಾರಿಗೆ ತರಲಾಗಿದೆ. ಉಳಿದ 7 ಕಾರ್ಯಕ್ರಮಗಳನ್ನು ಕೋವಿಡ್ ಹಿನ್ನಲೆಯ ಆರ್ಥಿಕ ಸಂಕಷ್ಟದ ಪರಿಸ್ಥಿತಿಯಲ್ಲಿ ಕೈಬಿಡಲಾಗಿದೆ. |

ಸಂಖ್ಯೆ: ಪಸಂಮೀ ಇ-76 ಮೀಇಯೋ 2021

(ಎಸ್. ಅಂಗಾರ)
ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ಅನುಬಂಧ–1

ಮೀನುಗಾರಿಕೆ ಇಲಾಖೆಯ ಯೋಜನೆಗಳು.

1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

a. "ಮತ್ಸ್ಯ ಕೃಷಿ ಆಶಾ ಕಿರಣ" ಯೋಜನೆಯಡಿ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುತ್ತಿದೆ..

b. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

c. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/– ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/– ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

d. ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ಜಂಟಿ ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆಗೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು. ಕ್ಲಸ್ಟರ್ ಪ್ರದೇಶದಲ್ಲಿ ಕೃಷಿಗೆ ಅನುಪಯುಕ್ತವಾಗಿರುವ ಜೌಗು–ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುವುದು.

e. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 400 ಘಟಕಗಳಿಗೆ ಸಹಾಯಧನ ನೀಡುವ ಉದ್ದೇಶಿಸಲಾಗಿದೆ.

2. ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುವುದು.

3. ನೀಲಿ ಕ್ರಾಂತಿ – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ) ಕೇಂದ್ರ ಸರ್ಕಾರದ ನೀಲಿಕ್ರಾಂತಿ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ ಕರಾವಳಿ ಮೀನುಗಾರಿಕೆ, ಮೂಲಭೂತ ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ, ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ, ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಮತ್ತು ಅದರ ಚಟುವಟಿಕೆಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಶೇ.24 ರಷ್ಟು ನೆರವಿನೊಂದಿಗೆ ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

4. ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ

ಉತ್ತರ ಕರ್ನಾಟಕದಲ್ಲಿ ಸುಮಾರು 1.64 ಲಕ್ಷ ಹೆಕ್ಟೇರ್ ವಿಸ್ತೀರ್ಣದ ಜಲಾಶಯಗಳು 42,195 ಹೆಕ್ಟೇರ್ ವಿಸ್ತೀರ್ಣದ ದೊಡ್ಡಕೆರೆಗಳು, 20667 ಹೆಕ್ಟೇರ್ ವಿಸ್ತೀರ್ಣದ ಗ್ರಾಮ ಪಂಚಾಯತ್ ಕೆರೆಗಳು, ನದಿಗಳು ಮತ್ತು ಕಾಲುವೆಗಳಿದ್ದು, ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ವಿಫುಲ ಅವಕಾಶವನ್ನು ನೀಡುತ್ತವೆ. ಈ ಹಿನ್ನೆಲೆಯಲ್ಲಿ "ನಿಜ ಶರಣ ಶ್ರೀ.ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಂಸ್ಥೆ" ಎಂಬ ಸಂಸ್ಥೆಯನ್ನ ಸ್ಥಾಪಿಸಲಾಗಿದೆ. ಉದ್ದೇಶಿತ ಸಂಸ್ಥೆಯ ಮುಖ್ಯ ಉದ್ದೇಶಗಳೆಂದರೆ,

- ಉತ್ತರ ಕರ್ನಾಟಕದ ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸುವುದು.
- ಅಗತ್ಯ ಯೋಜನಾ ವರದಿ ಸಿದ್ಧಪಡಿಸಿ ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನವನ್ನು ಪಡೆದು ಕಾರ್ಯಕ್ರಮ ಅನುಷ್ಠಾನಗೊಳಿಸುವುದು. ಮತ್ತು
- ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ಧಿಯಲ್ಲಿ ನಿರತರಾಗಿರುವ ಸಂಸ್ಥೆಗಳು ಹಾಗೂ ಮೀನುಗಾರರ ಸಂಘಟನೆಗಳ ಸಹಯೋಗದೊಂದಿಗೆ ಉತ್ತರ ಕರ್ನಾಟಕದ ಮೀನುಗಾರಿಕೆ ಮತ್ತು ಮೀನು ಕೃಷಿ ಅಭಿವೃದ್ಧಿಗೆ ಕ್ರಮವಹಿಸುವುದು.

5. ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುವುದು.

6. ಮತ್ಸ್ಯ ಆಶ್ರಯ ಯೋಜನೆ

ಮೀನುಗಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲು ಮತ್ಸ್ಯಾಶ್ರಯ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮತ್ಸ್ಯಾಶ್ರಯ ಯೋಜನೆಯಡಿ ಮನೆ ನಿರ್ಮಾಣಕ್ಕೆ ಸಾಮಾನ್ಯ ಮೀನುಗಾರರಿಗೆ ರೂ.1.20 ಲಕ್ಷ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಗ್ರಾಮೀಣ ಪ್ರದೇಶದಲ್ಲಿ ರೂ 1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ 2.00 ಲಕ್ಷ ಸಹಾಯಧನ ನೀಡಲಾಗುವುದು.

7. ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

8. ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ : ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್ ಮೇಲಿನ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ಸಹಾಯಧನವಾಗಿ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವ ಮೂಲಕ ಮರುಪಾವತಿ ಮಾಡುವುದು ಈ ಯೋಜನೆಯ ಉದ್ದೇಶ. ವಾರ್ಷಿಕ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1,50,000 ಕಿಲೋ ಲೀಟರ್ ಡೀಸಲ್ ಮೇಲಿನ ಮಾರಾಟ ಕರಕ್ಕೆ ಸಹಾಯಧನ ನೀಡಲಾತ್ತಿದೆ.

9. ಮೀನು ಮಾರುಕಟ್ಟೆಗಳ ನಿರ್ಮಾಣಕ್ಕಾಗಿ ಸಹಾಯ: ಮೀನುಗಾರರ ಸಹಕಾರ ಸಂಘಗಳಿಗೆ ತಮ್ಮ ಸ್ವಂತ ನಿವೇಶನದಲ್ಲಿ ನೀರು, ವಿದ್ಯುಚ್ಛಕ್ತಿ ಮತ್ತು ಇತರ ಸೌಲಭ್ಯಗಳೊಂದಿಗೆ ಕನಿಷ್ಠ 500 ಚದರಡಿಯ ಮೀನು ಸಂಗ್ರಹಣೆ ಹಾಗೂ ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಲು ಅಂದಾಜು 10 ಲಕ್ಷ ರೂ.ಗಳ ಘಟಕ ವೆಚ್ಚದಲ್ಲಿ ಶೇ.75 ರಷ್ಟು ಸಹಾಯಧನವನ್ನು ಒದಗಿಸುವ ಮೂಲಕ ನೆರವು ನೀಡಲಾಗುತ್ತಿದೆ.

10. ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

c. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾತ್ತಿದೆ.

d. ಮೀನುಗಾರರ ಹಾಗೂ ಮೀನುಗಾರರ ದೋಣಿಗಳ ಸುರಕ್ಷತೆಯ ನಿಟ್ಟಿನಲ್ಲಿ ಮೀನುಗಾರಿಕೆ ದೋಣಿಗಳಿಗೆ ಇಸ್ರೋ ಅಧಿಕೃತಗೊಳಿಸಿರುವ ಡಿ.ಎ.ಟಿ. ಉಪಕರಣವನ್ನು ಶೇ.50 ರಷ್ಟು ಸಹಾಯಧನ ನೀಡಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಲಾಗುವುದು.

11. ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

12. ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)

ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

ಆ) ಸಾಮೂಹಿಕ ವಿಮಾ ಯೋಜನೆ: ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.2,00,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1,00,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿಗೆ ಬಿಡುಗಡೆ ಮಾಡಲಾಗುವುದು.

13. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತಿದೆ.

14. ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆ ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಮಳೆ ಹಾಗೂ ಮೀನು ಸಾಗಾಣಿಕೆಯಿಂದ ಈ ಮೀನುಗಾರಿಕೆ ಕೊಂಡಿ ರಸ್ತೆಗಳು ಹಾಳಾಗುತ್ತದೆ. ಇವುಗಳ ದುರಸ್ತಿ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ.

15. ಗಿರಿ ಜನ ಉಪ ಯೋಜನೆ ಈ ಯೋಜನೆಯಡಿ ಪರಿಶಿಷ್ಟ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಸಂಚಾರಿ/ ರೀಟೇಲ್ ಮೀನು ಖಾದ್ಯಗಳ ಕ್ಯಾಂಟೀನ್/ ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಸಹಾಯ (ಘಟಕ ವೆಚ್ಚ ರೂ.10.00 ಲಕ್ಷ ; ಸಹಾಯಧನ : ಶೇ.70 ರಷ್ಟು ಗರಿಷ್ಠ ರೂ.7.00 ಲಕ್ಷ) ನೆರವು ನೀಡಲಾಗುವುದು.

<u>ಜಿಲ್ಲಾ ಪಂಚಾಯತ್ ಯೋಜನೆಗಳು</u>

1. ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ: ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗುತ್ತಿದೆ.

2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ: ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ

ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10,000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ, ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

4. ಪ್ರದರ್ಶನ ಮತ್ತು ತರಬೇತಿ ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು. ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಈ ಯೋಜನೆಗಳಲ್ಲದೆ ಮೀನುಗಾರಿಕೆ ಇಲಾಖೆಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**
  ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ, ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಫೈಬರ್ ಗ್ಲಾಸ್ ಹರಿಗೋಲು ವಿತರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- **ಕೆರೆಗಳ ಅಭಿವೃದ್ಧಿ:**
  ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರೆಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಆ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುವುದು.